**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ ಉತ್ತರ ಕನ್ನಡ : ಕಾರವಾರ**

**ಸ್ಪೆಷಲ್ ಕೇಸ್ ನಂ. 3/2010**

**ದೋ.ಸಾ. :112 ಫ್ರಾ.ಸಾ. : 54**

ಸಾಕ್ಷಿಯ ಹೆಸರು : ನಾರಾಯಣ ಹನುಮ ಸಣ್ಣಟ್ಟಿ
ತಂದೆಯ ಹೆಸರು : ಹನುಮ ಸಣ್ಣಟ್ಟಿ
ವಯಸ್ಸು : 75 ವರ್ಷ
ಉದ್ಯೋಗ : ರೈತಾಪಿ.
ವಾಸ : ತೋರಣಕೊಪ್ಪ, ಸೊರಬಾ.

**ದಿನಾಂಕಃ 05-12-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಿಶೇಷ ಸರಕಾರಿ ಅಭಿಯೋಜಕರಿಂದ**

1. ನಾನು ಕಾನಗೋಡು ಗ್ರಾಮದಲ್ಲಿ ಸುಮಾರು 30 ವರ್ಷದ ಹಿಂದೆ ವಾಸ ಇದ್ದೆ. ನಂತರ ನಾನು ಕಾನಗೋಡು ಬಿಟ್ಟು ತೋರಣಕೊಪ್ಪ ಗ್ರಾಮಕ್ಕೆ ಹೋಗಿ ವಾಸ ಇದ್ದೇನೆ. ನ್ಯಾಯಾಲಯದ ಮುಂದೆ ಇರುವ ಆರೋಪಿಯ ಪರಿಚಯ ನನಗೆ ಇಲ್ಲ. ಆರೋಪಿ ಕಾನಗೋಡು ಗ್ರಾಮ ಪಂಚಾಯತಿಯ ಅಧ್ಯಕ್ಷ ಆಗಿದ್ದ ವಿಚಾರ ನನಗೆ ಗೊತ್ತಿಲ್ಲ. ನನಗೆ ಕಾನಗೋಡು ಗ್ರಾಮದಲ್ಲಿ ಸ್ವಂತ ಮನೆ ಇತ್ತು, ಈಗ ಇಲ್ಲ. 2001-02 ರಲ್ಲಿ ಸರ್ಕಾರ ಸ್ವಚ್ಛ ಗ್ರಾಮ ಯೋಜನೆ ಅಡಿಯಲ್ಲಿ ನಮ್ಮ ಗ್ರಾಮಕ್ಕೆ ಶೌಚಾಲಯ ನಿರ್ಮಿಸಿಕೊಳ್ಳಲು ರೂ.20 ಲಕ್ಷ ಅನುದಾನ ನೀಡಿದ ಬಗ್ಗೆ ನನಗೆ ಗೊತ್ತಿಲ್ಲ. ನನಗೆ ಇಸವಿ ಗೊತ್ತಾಗುವುದಿಲ್ಲ. ಅದರಲ್ಲಿ 210 ಫಲಾನುಭವಿಗಳು ಆಯ್ಕೆ ಆಗಿದ್ದರು ಮತ್ತು ಅದರಲ್ಲಿ ನನ್ನ ಹೆಸರು ಇತ್ತು ಮತ್ತು ಪ್ರತಿ ಫಲಾನುಭವಿಗಳಿಗೆ ರೂ.3000/- ಸಹಾಯಧನ ನೀಡಬೇಕಿತ್ತು ಎನ್ನುವದು ನನಗೆ ಗೊತ್ತಿಲ್ಲ. ನನಗೆ ರೂ.3000/- ಸಹಾಯಧನವನ್ನು ಗ್ರಾಮ ಪಂಚಾಯತಿಯಿಂದ ಕೊಟ್ಟಿಲ್ಲ. ಪೊಲೀಸನವರು ನನ್ನನ್ನು ಈ ಪ್ರಕರಣದಲ್ಲಿ ವಿಚಾರಣೆ ಮಾಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಮಾನ್ಯ ಅಭಿಯೋಜಕರು ಅನುಮತಿಯನ್ನು ಕೇಳುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಗಮನಿಸಿ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ವಿಶೇಷ ಸರಕಾರಿ ಅಭಿಯೋಜಕರಿಂದಃ-**

2. ದಿನಾಂಕಃ 14.09.2005 ರಂದು ಕಾರವಾರದ ಲೋಕಾಯುಕ್ತ ಆರಕ್ಷಕ ನಿರೀಕ್ಷಕರ ಮುಂದೆ ನಾನು 2001-02 ನೇ ಸಾಲಿನಲ್ಲಿ ಕಾನಗೋಡ ಗ್ರಾಮದಲ್ಲಿ ಸ್ವಚ್ಛ ಗ್ರಾಮ ಯೋಜನೆ ಅಡಿಯಲ್ಲಿ ಸರ್ಕಾರದಿಂದರೂ.20 ಲಕ್ಷ ಮಂಜೂರು ಆಗಿತ್ತು ಮತ್ತು 210 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿತ್ತು ಮತ್ತು ನನ್ನ ಹೆಸರು ಆಯ್ಕೆ ಮಾಡಿದ್ದರು, ಆದರೆ ತನಗೆ ರೂ.3000/- ಸಹಾಯಧನವನ್ನು ಕೊಟ್ಟಿಲ್ಲ ಎಂದು ಮತ್ತು ಶೌಚಾಲಯನ್ನು ಸಹ ಕಟ್ಟಿಸಿಕೊಟ್ಟಿಲ್ಲ ಎಂದು ಹೇಳಿಕೆ ಕೊಟ್ಟಿಲ್ಲ. ಸದರಿ ಹೇಳಿಕೆಯನ್ನು ನಿಪಿ-84 ಎಂದು ಗುರುತಿಸಲಾಯಿತು. ನನಗೆ ಆ ಎಲ್ಲಾ ವಿಚಾರ ಗೊತ್ತಿದ್ದರೂ ಮತ್ತು ಆ ರೀತಿ ಹೇಳಿಕೆ ಕೊಟ್ಟಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ವಕೀಲರಾದ ಶ್ರೀ ಜಿ ಟಿ ಎನ್ ರವರಿಂದಃ-**

3. ನಾನು 2001-02 ರಲ್ಲಿ ಶೌಚಾಲಯ ನಿರ್ಮಾಣ ಮಾಡಲು ಗ್ರಾಮ ಪಂಚಾಯತಿಯಿಂದ ಸಹಾಯಧನ ಪಡೆದಿದ್ದರೂ ಈಗ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ – ಇಲ್ಲ –**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ)

ಓ.ಹೇ.ಕೇ.ಸ.ಇ.

(ಡಿ.ಎಸ್. ವಿಜಯಕುಮಾರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ , ಕಾರವಾರ